ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು, ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ. ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಅನುಬಂಧ–1)

12. ಪ್ರಕಟಣೆ :

ವಿಧಾನಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 118ರ ಮೇರೆಗೆ ಕರ್ನಾಟಕ ವಿಧಾನಪರಿಷತ್ತು 2012 ನೇ ಸಾಲಿನ ಈ ಕೆಳಕಂಡ ವಿಧೇಯಕಗಳನ್ನು ದಿನಾಂಕ: 01.08.2012 ಹಾಗೂ 02.08.2012 ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿದೆ ಎಂದು ತಿಳಿಸಿರುತ್ತಾರೆ.

1. ಕರ್ನಾಟಕ ಪೌರ ನಿಗಮಗಳ ಮತ್ತು ಕೆಲವು ಇತರೆ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2012

2. ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2012

3. ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ವಿಧೇಯಕ, 2012.

4. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ ಮತ್ತು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2012

5. ಕರ್ನಾಟಕ ಪಶುವೈದ್ಯಕೀಯ ಮತ್ತು ಪಶು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2012

6. ಕರ್ನಾಟಕ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ, 2012

13. ಶಾಸನ ರಚನೆ :

ಅಧ್ಯಕ್ಷರು : ವಿಧೇಯಕಗಳನ್ನು ಮಂಡಿಸುವುದು.

1. ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕ 2012

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವ ವಿದ್ಯಾಲಯ ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಪ್ರಸ್ತಾವನೆ ಮಂಡಿಸಲಾಯಿತು.

ಅಧ್ಯಕ್ಷರು : ಈಗ ಪ್ರಸ್ತಾವನೆಯನ್ನು ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ,

2012ನೇ ಸಾಲಿನ ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು,
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು
ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ.

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.